**ಅಸಲು ದಾವಾ ನಂ : 719/2019**

**ಪಿಡಬ್ಲೂ.1**

ದಿನಾಂಕ : 23.08.2021

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ ಶ್ರೀ ಟಿ ಎಲ್ ಪಿ ವಾದಿ ಪರ ವಕೀಲರಿಂದ**

ನಾನು ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲ ಸಂಗತಿಗಳನ್ನು ಓದಿಸಿ ತಿಳಿದುಕೊಂಡಿದ್ದು ಅವು ಸತ್ಯವಾಗಿರುತ್ತವೆ. ಅದಕ್ಕೆ ನಾನು ನನ್ನ ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರ್ಪಡಿಸಿರುತ್ತೇನೆ.

ನಾನು ದಾವಾಸ್ತಿ ಅರಳಿಹಟ್ಟಿ ಗ್ರಾಮದ ವ್ಹಿ ಪಿ ಸಿ ನಂ.273 ರ 2019 20 ನೇ ಸಾಲಿನ ಕರಾಕರಣೆಯ ದೃಡಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.1 ಎಂದು, ಸದರಿ ಆಸ್ತಿಗೆ ಸಂಬಂಧಪಟ್ಟಂತೆ ಅಡಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಆಗಿರುವ ಠರಾವಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು, ಅಡಹಳ್ಳಿ ಗ್ರಾಮ ಪಂಚಾಯಿತಿಗೆ ವಾದಿಯು ತಮ್ಮ ವಕೀಲರ ಮೂಲಕ ನೋಟಿಸನ್ನು ನೀಡಿದ್ದು ಅದನ್ನು ನಿ.ಪಿ.3 ಎಂದು, ಸದರಿ ನೋಟಿಸನ್ನು ಕಳುಹಿಸಿದ ಬಗ್ಗೆ ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.4 ಎಂದು, ಗುರಪ್ಪರವರ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.5 ಎಂದು, ಅದೇ ರೀತಿ ಬಸಗೊಂಡರವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ : ಕಾಲಾವಕಾಶ ಕೋರಿದ್ದು, ನೀಡಲಾಯಿತು.

ಓ.ಹೇ.ಕೇ. ಸರಿ ಇದೆ,

4 ನೇ ಹೆಚ್ಚುವರಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ. ನ್ಯಾಯಾಲಯ ಅಥಣಿ.